ಕರ್ನಾಟಕ ಸರ್ಕಾರ

ಸಮಗ್ರ ಮಕ್ಕಳ ರಕ್ಷಣಾಯೋಜನೆ,

C/o ನಿರ್ದೇಶನಾಲಯ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಒಂದನೇ ಮಹಡಿ, ಬಹು ಮಹಡಿಗಳ ಕಟ್ಟಡ, ಡಾ॥ಬಿ.ಆರ್. ಅಂಬೇಡ್ಕರ್ ವೀಧಿ, ಬೆಂಗಳೂರು-560001,ಕರ್ನಾಟಕ

**Phone No: 080-22879381**

**E-mailID:icpc.kar@gmail.com**

ಸಂಖ್ಯೆ:ಕರಾಸಮರಸೊ/ಐಇಸಿ/2020-21

ದಿನಾಂಕ:10-04-2020

ನಿರ್ದೇಶಕರು,

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ,

ನಂ.17, ವಾರ್ತಾಸೌಧ, ಭಗವಾನ್ ಮಹಾವೀರ ರಸ್ತೆ,

ಬೆಂಗಳೂರು.

ಮಾನ್ಯರೇ,

ವಿಷಯ: ಕೋವಿಡ್-19 ರ ಹಿನ್ನೆಲೆಯಲ್ಲಿ ಮಕ್ಕಳ ಫೋಟೋ ಮತ್ತು ಇನ್ನಿತರ ವಿವರಗಳನ್ನು ಬಳಸಿ ದೇಣಿಗೆ ಪಡೆಯುವುದು ಬಾಲನ್ಯಾಯ ಕಾಯ್ದೆ 2015ರ ಉಲ್ಲಂಘನೆ ಎಂದು ತಿಳಿಸಲು ಕೋರಿ ಪತ್ರಿಕಾ ಪ್ರಕಟಣೆ ನೀಡುವ ಬಗ್ಗೆ.

********

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಸಮಗ್ರ ಮಕ್ಕಳ ರಕ್ಷಣಾ ಯೋಜನೆಯು ನಿರ್ಲಕ್ಷತೆಗೊಳಗಾದ, ಪರಿತ್ಯಜಿಸಲ್ಪಟ್ಟ, ದೌರ್ಜನ್ಯಕ್ಕೆ ಒಳಗಾದ, ಶೋಷಣೆಗೆ ಒಳಗಾದ ಮತ್ತು ಕುಟುಂಬದಿಂದ ಬೇರ್ಪಟ್ಟ ಮಕ್ಕಳು ದುರ್ಬಲ ಸ್ಥಿತಿಗೆ ತಲುಪದಿರುವಂತೆ ತಡೆಯಲು ಹಾಗೂ ಇಂತಹ ಪ್ರಕರಣಗಳನ್ನು ಕಡಿಮೆ ಮಾಡಲು ಮತ್ತು ಸಂಕಷ್ಟದಲ್ಲಿರುವ ಮಕ್ಕಳ ಪರಿಸ್ಥಿತಿಯನ್ನು ಉತ್ತಮಪಡಿಸುವ ಉದ್ದೇಶವನ್ನು ಹೊಂದಿರುವ ಕೇಂದ್ರ ಪುರಸ್ಕೃತ ಯೋಜನೆಯಾಗಿರುತ್ತದೆ. ಸಮಗ್ರ ಮಕ್ಕಳ ರಕ್ಷಣಾ ಯೋಜನೆಯಡಿ ಅಂದಾಜು 1000 ಸರ್ಕಾರಿ ಹಾಗೂ ಸರ್ಕಾರೇತರ ಮಕ್ಕಳ ಪಾಲನಾ ಸಂಸ್ಥೆಗಳನ್ನು ನೋಂದಾಯಿಸಿ ವಸತಿ ಕಲ್ಪಿಸಲಾಗಿದೆ.

ನೋವೆಲ್ ಕೊರೋನಾ ವೈರಸ್ ಡಿಸೀಜ್ (ಕೋವಿಡ್-19) ಮಹಾಮಾರಿಯು ಭಯಾನಕವಾಗಿ ದೇಶದಲ್ಲಿ ಹರಡುತ್ತಿರುವ ಹಿನ್ನೆಲೆಯಲ್ಲಿ ಸ್ವಯಂ ಸೇವಾ ಸಂಸ್ಥೆಗಳು ನಡೆಸುತ್ತಿರುವ ಹಲವಾರು ಮಕ್ಕಳ ಪಾಲನಾ ಸಂಸ್ಥೆಗಳಲ್ಲಿ ಮಕ್ಕಳ ಆರೈಕೆ, ಪಾಲನೆ ಪೋಷಣೆಗಾಗಿ ಹಾಗೂ ಇನ್ನಿತರ ವೆಚ್ಚಗಳಿಗೆ ಮಕ್ಕಳ ಪೋಟೋ ಬಳಸಿ ದೇಣಿಗೆ ಪಡೆಯುತ್ತಿರುವುದು ಗಮನಕ್ಕೆ ಬಂದಿರುತ್ತದೆ. ಆದರೆ ಈ ವರ್ತನೆಯು ಬಾಲ ನ್ಯಾಯ(ಮಕ್ಕಳ ಪಾಲನೆ ಮತ್ತು ಸಂರಕ್ಷಣೆ) ಅಧಿನಿಯಮ 2015ರ ಕಲಂ 74ರ ಉಲ್ಲಂಘನೆಯಾಗಿರುತ್ತದೆ. ಈ ವಿಷಯದ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸಲು ಹಾಗೂ ಇಂತಹ ಸಂದರ್ಭಗಳಲ್ಲಿ ಸರ್ಕಾರದ ನೆರವನ್ನು ಪಡೆಯಲು ಹಾಗೂ ಕೋವಿಡ್-19 ತುರ್ತು ಪರಿಸ್ಥಿತಿಯಲ್ಲಿ ಸಮಗ್ರ ಮಕ್ಕಳ ರಕ್ಷಣಾ ಯೋಜನೆಯ ಅಧಿಕಾರಿಗಳನ್ನು ಸಂಪರ್ಕಿಸುವಂತೆ ಮಾಧ್ಯಮಗಳಲ್ಲಿ ಪ್ರಕಟಿಸಬೇಕಾಗಿರುತ್ತದೆ. ಆದುದರಿಂದ ತಮ್ಮ ಇಲಾಖೆ ವತಿಯಿಂದ ರಾಜ್ಯದ ಪ್ರಮುಖ ದೃಶ್ಯ, ಶ್ರವಣ ಮತ್ತು ಮುದ್ರಣ ಮಾಧ್ಯಮಗಳಲ್ಲಿ ಉಚಿತವಾಗಿ ಪ್ರಕಟಣೆಯನ್ನು ಹೊರಡಿಸಲು ಕೋರಿದೆ. ಪ್ರಕಟಣೆಯ ವಿಷಯವನ್ನು ಪತ್ರಕ್ಕೆ ಲಗತ್ತಿಸಿದೆ.

ತಮ್ಮ ವಿಶ್ವಾಸಿ,

11.04.2020

ನಿರ್ದೇಶಕರು,

ಸಮಗ್ರ ಮಕ್ಕಳ ರಕ್ಷಣಾ ಯೋಜನೆ,

REDMI NOTE 8
AI QUAD CAMERA

REDMI NOTE 8
AI QUAD CAMERA

ಕರ್ನಾಟಕ ಸರ್ಕಾರ
ಸಮಗ್ರ ಮಕ್ಕಳ ರಕ್ಷಣಾಯೋಜನೆ
ಕರ್ನಾಟಕರಾಜ್ಯ ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿ
**C/o,** ನಿರ್ದೇಶನಾಲಯ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಒಂದನೇ ಮಹಡಿ, ಬಹು ಮಹಡಿಗಳ ಕಟ್ಟಡ, ಡಾ॥ ಬಿ.ಆರ್.ಅಂಬೇಡ್ಕರ್ ವೀದಿ, ಬೆಂಗಳೂರು-560 001. 080-22879382

ಸಂ.ಕರಾಮರಸೊ/ಕೋವಿಡ್/2020-21

ದಿನಾಂಕ.10.04.2020

## ಪತ್ರಿಕಾ ಪ್ರಕಟಣೆ

ಮಕ್ಕಳ ಪೋಷಣೆ ಮತ್ತು ರಕ್ಷಣೆ ಸರ್ಕಾರದ ಆಧ್ಯತೆಯಾಗಿದ್ದು ಮಕ್ಕಳ ಸುರಕ್ಷತೆಗಾಗಿ ಬಾಲ ನ್ಯಾಯ(ಮಕ್ಕಳ ಪಾಲನೆ ಮತ್ತು ಸಂರಕ್ಷಣೆ) ಅಧಿನಿಯಮ 2015ಅನ್ವಯ ಸಮಗ್ರ ಮಕ್ಕಳ ರಕ್ಷಣಾ ಯೋಜನೆಯನ್ನು ಅನುಷ್ಠಾನಗೊಳಿಸಲಾಗಿದೆ.

ಸಮಗ್ರ ಮಕ್ಕಳ ರಕ್ಷಣಾ ಯೋಜನೆಯು ನಿರ್ಲಕ್ಷತೆಗೊಳಗಾದ, ಪರಿತ್ಯಜಿಸಲ್ಪಟ್ಟ, ದೌರ್ಜನ್ಯಕ್ಕೆ ಒಳಗಾದ, ಶೋಷಣೆಗೆ ಒಳಗಾದ ಮತ್ತು ಕುಟುಂಬದಿಂದ ಬೇರ್ಪಟ್ಟ ಮಕ್ಕಳು ದುರ್ಬಲ ಸ್ಥಿತಿಗೆ ತಲುಪದಿರುವಂತೆ ತಡೆಯಲು ಹಾಗೂ ಇಂತಹ ಪ್ರಕರಣಗಳನ್ನು ಕಡಿಮೆ ಮಾಡಲು ಮತ್ತು ಸಂಕಷ್ಟದಲ್ಲಿರುವ ಮಕ್ಕಳ ಪರಿಸ್ಥಿತಿಯನ್ನು ಉತ್ತಮಪಡಿಸುವ ಉದ್ದೇಶವನ್ನು ಹೊಂದಿರುತ್ತದೆ. ಇದಕ್ಕಾಗಿ ಬಾಲ ನ್ಯಾಯ(ಮಕ್ಕಳ ಪಾಲನೆ ಮತ್ತು ಸಂರಕ್ಷಣೆ) ಅಧಿನಿಯಮ 2015ಸಕ್ಷನ್ 41 ರ ಪ್ರಕಾರ ರಾಜ್ಯವ್ಯಾಪಿ ಅಂದಾಜು 1000 ಸರ್ಕಾರಿ ಹಾಗು ಸರ್ಕಾರೇತರ ಪಾಲನಾ ಸಂಸ್ಥೆಗಳನ್ನು ನೋಂದಾಯಿಸಿ ಪುನರ್ವಸತಿಯನ್ನು ಕಲ್ಪಿಸಲಾಗಿದೆ.

ನೋವೆಲ್ ಕರೋನಾ ವೈರಸ್ ಡಿಸೀಜ್(ಕೋವಿಡ್-19)ಮಹಾಮಾರಿಯು ಭಯಾನಕವಾಗಿ ದೇಶದಲ್ಲಿ ಹರುಡುತ್ತಿರುವ ತುರ್ತು ಸಂದರ್ಭದಲ್ಲಿ ಕೋವಿಡ್-19 ಸೋಂಕು ಹರಡುವಿಕೆಯೆನ್ನು ತಡೆಗಟ್ಟುವುದು ಎಲ್ಲರ ಆದ್ಯ ಕರ್ತವ್ಯವಾಗಿರುತ್ತದೆ. ರಾಜ್ಯದಲ್ಲಿ ಸ್ವಯಂ ಸೇವಾ ಸಂಸ್ಥೆಗಳು ನಡೆಸುತ್ತಿರುವ ಹಲವಾರು ಮಕ್ಕಳ ಪಾಲನಾ ಸಂಸ್ಥೆಯವರು ತಮ್ಮ ಸಂಸ್ಥೆಗಳಲ್ಲಿ ಪಾಲನೆ, ಪೋಷಣೆ ಮತ್ತು ಆರೈಕೆಗಾಗಿ ಅನಾಥ/ ನಿರ್ಗತಿಕ/ ಏಕಪೋಷಕ/ ಬಡಮಕ್ಕಳು ದಾಖಲಾಗಿದ್ದಾರೆಂದು ತಿಳಿಸಿ, ರಾಜ್ಯದಲ್ಲಿ ಕೋವಿಡ್-19 ಬಂದಿರುವುದರಿಂದ ಸಂಸ್ಥೆಯಲ್ಲಿ ಹಣಕಾಸಿನ ತೊಂದರೆಯಾಗಿರುತ್ತದೆಂದು ತಿಳಿಸಿ, ಸಂಸ್ಥೆಯಲ್ಲಿ ಮಕ್ಕಳ ಆರೈಕೆ, ಊಟೋಪಚಾರ, ವೈದ್ಯಕೀಯ ವೆಚ್ಚ ಹಾಗು ಇನ್ನಿತರ ವೆಚ್ಚಗಳಿಗೆ ಧನ ಸಹಾಯ ಕೋರಿ ಸಾಮಾಜಿಕ ಜಾಲತಾಣಗಳಲ್ಲಿ ಮಕ್ಕಳ ವೈಯುಕ್ತಿಕ ಮಾಹಿತಿ, ಛಾಯಾಚಿತ್ರ ಹಾಗು ಸಂಸ್ಥೆಯ ವಿವರಗಳನ್ನೊಳಗೊಂಡಂತೆ ಸಂದೇಶವನ್ನು ರವಾನೆ ಮಾಡಿ ದೇಣಿಗೆ ಪಡೆಯುತ್ತಿರುವುದು ಗಮನಕ್ಕೆ ಬಂದಿರುತ್ತದೆ.

ಬಾಲ ನ್ಯಾಯ(ಮಕ್ಕಳ ಪಾಲನೆ ಮತ್ತು ಸಂರಕ್ಷಣೆ) ಅಧಿನಿಯಮ 2015 ಸೆಕ್ಷನ್ 74ರ ಪ್ರಕಾರ ಪೋಷಣೆ ಮತ್ತು ರಕ್ಷಣೆ ಅಗತ್ಯತೆ ಇರುವ ಮಕ್ಕಳ ಗುರುತಿಸುವಿಕೆಯನ್ನು(ಐಡೆಂಟಿಫಿಕೇಷನ್) ಬಹಿರಂಗಪಡಿಸುವ ಯಾವುದೇ ಮಾಹಿತಿಯ(ಮಕ್ಕಳ ಫೋಟೋ, ಹೆಸರು, ವಿಳಾಸ ಇತ್ಯಾದಿ) ವಿವರಗಳನ್ನು ಯಾವುದೇ ಮಾಧ್ಯಮಗಳ ಮುಖಾಂತರ ಬಹಿರಂಗಪಡಿಸುವುದು ಶಿಕ್ಷಾರ್ಹ ಅಪರಾಧವಾಗಿರುತ್ತದೆ. ಸೆಕ್ಷನ್ 74ರ ಸಬ್‌ಸೆಕ್ಷನ್3(1) ಪ್ರಕಾರ ನಿಬಂಧನೆಗಳನ್ನು ಉಲ್ಲಂಘಿಸುವ ಯಾವುದೇ ವ್ಯಕ್ತಿಗೆ 6 ತಿಂಗಳವರೆಗೆ ಕಾರಾಗೃಹ ವಾಸ ಅಥವಾ 2 ಲಕ್ಷ ರೂಪಾಯಿಗಳವರೆಗೆ ದಂಡ ಅಥವಾ ಎರಡೂ ರೀತಿಯ ಶಿಕ್ಷೆಯನ್ನು ವಿಧಿಸಬಹುದಾಗಿದೆ.

ಸದರಿ ತುರ್ತು ಪರಿಸ್ಥಿತಿಯಲ್ಲಿ ಮಕ್ಕಳ ಆರೈಕೆಗಾಗಿ ಮೂಲಭೂತ ಸೌಕರ್ಯಗಳಿಗಾಗಿ ಸಮಸ್ಯೆ ಇದ್ದಲ್ಲಿ ಆಯಾ ಜಿಲ್ಲೆಗಳ ಸಂಬಂಧಪಟ್ಟ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳನ್ನು ಸಂಪರ್ಕಿಸುವುದು. ಹಾಗೂ ಮಕ್ಕಳಿಗೆ ಸಂಬಂಧಪಟ್ಟ ಯಾವುದೇ ವಿಷಯಕ್ಕೆ ಚೈಲ್ಡ್ ಲೈನ್‌ನ ಟೋಲ್‌ಫ್ರೀ ನಂ.1098(24X7) ಸಂಪರ್ಕಿಸಬಹುದು.

11.04.2020

ನಿರ್ದೇಶಕರು
ಸಮಗ್ರ ಮಕ್ಕಳ ರಕ್ಷಣಾ ಯೋಜನೆ
ಬೆಂಗಳೂರು

REDMI NOTE 8
AI QUAD CAMERA